ಫಿನರ್ಷಿಯಲ್ ಸಲಾಮಾ.

1882ನೇ ಮೈಸೂರು ರೆಯಿಲ್‌ವೇ ಲೋ್ನ್.

ತಾರೀಖು 6ನೇ ಜುಲೈ 1883.

ಲಂಡ್ಸ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಷರಾ ಬರೆಯಲ್ಪಡಬಹುದಾದ ತಾ ಸದರೀ ಸೂಲದ ಡಿಪೆಂಚರ್‌ಗಳ ಮೇಲೆ ಲಂಡ್ಸ್‌ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕೌಟ್ಸ್ ಆಂಡ್ ಕೋಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡ್ಸ್‌ನಲ್ಲಿ ತಮ್ಮ ಡಿಪೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟಪ್ಪವರ್ಳ್ಳ ಜನಗಳು ತಮ್ಮ ಡಿಪೆಂಚರ್‌ಗಳನ್ನು ಎಸ್ಫೇನ್‌ಮೆಂಟ್ ಯಾನೇ ಷರಾ ಬಗ್ಗೆ ಇದರಡಿ ರುಜು ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡೀಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿವಾಂಡ್ ಡ್ರಾಫ್ಟ್‌ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಸ್ಫೇನ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸನ್,
ಕಾಂಪ್ಟ್ರೋಲರ್.

ನಂದೀದುರ್ಗ ಡಿವೀಜ್ಯ.

ನಂದೀದುರ್ಗ ಡಿವೀಜ್ಯ ಡಿಸ್ಟ್ರಿಕ್ಟ್ ಜಡ್ಜ್‌ರೀಯವರ ಕೋರ್ಟ್‌ನಲ್ಲಿ.

1884ನೇ ಇಸವಿ ಅರ್ಜೀ ನಂಬರ್ 108.

ಮೃತಪಟ್ಟ ಕೆಂಪನೂಲು ಭದ್ರಂಣನ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಮುನಿಯಮ್ಮ, ಮುನಿಶಾಮಂಣ, ಮೃತಪಟ್ಟ ಸದರೀ ಭದ್ರಂಣನಿಗೆ ಹೆಂಡತಿ-ಅಳಿಯ ಆಗಬೇಕೆಂಬ ಹಕ್ಕುದಾರೀ ಮೇಲೆ ಆನೇಕಲ್ ಸ್ಥಳದ ಮುನಿಯಮ್ಮ, ಮುನಿಶಾಮಂಣ, ಡಿಬೋ ವಾಸಸ್ಥರಾಗಿ ಮೃತಪಟ್ಟ ಭದ್ರಂಣನ ಜೊಂದಗೀ ಬಗ್ಗಾಗಿ. ಬರತಕ್ಕ ಸೂಲಗಳನ್ನು ಮೈನರ್ ಮಗ ಶಿಂಕರಪ್ಪನಿಗೋಸ್ಕರ ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರೆಗೆ ಸರಟಿಫಿಕೇಟ್ ಬಗ್ಗೆ ಈ ಕೋರ್ಟ್‌ಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದ್ದಾರರಾದ ಮುನಿಯಮ್ಮ, ಮುನಿಶಾಮಂಣನ ಅರ್ಜೀಯನ್ನು 1884ನೇ ಇಸವಿ ಮೇ ತಿಂಗಳು ತಾರೀಖು 30ರಲ್ಲು ಬೆಂಗಳೂರು ಪೊಕ್ಕ್ತಿನಲ್ಲಿ ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡತ್ತೆ. ಆ ಕಾಲದಲ್ಲಿ ಸದರೀ ಮೃತ ಪಟ್ಟ ಭದ್ರಂಣನ ಆಸ್ತಿಗೆ ಹಕ್ಕುದಾರರಾದ ವಿನಿಷ್ಯರೂ ಈ ಕೋರ್ಟ್‌ನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಮಾರ್ಚೀ ತಿಂಗಳು 20ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಟಿ. ಆರ್. ಎ. ತಂಬುಚೆಟ್ಟಿ,
ಡಿಸ್ಟ್ರಿಕ್ಟ್ ಜಡ್ಜ್.

ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜ್‌ರೀಯವರ ಕೋರ್ಟ್‌ನಲ್ಲಿ.

1884ನೇ ಇಸವಿ ಅರ್ಜೀ ನಂಬರ್ 119.

ಮೃತಪಟ್ಟ ಆಗಸಾಲೇ ಪಟ್ಟ್ಯಾಚಾರೀ ಆಸ್ತಿ ವಿಷಯದಲ್ಲಿ—

ಅರ್ಜೀದಾರ ನರಸುಮ್ಮ, ಪಟ್ಟ್ಯಾ, ಮೈನರ್ ಗಾರ್ಡಿಯರ್ ಮತ್ತು ತಾಯಿ ಪುಟ್ಟಮ್ಮ, ಮೃತಪಟ್ಟ ಸದರೀ ಪಟ್ಟ್ಯಾಚಾರಿಗೆ ಹೆಂಡತಿ ಮಕ್ಕಳು ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಯಿಟಿಗೂಡು ಸ್ಥಳದ ನರಸುಮ್ಮ, ಪಟ್ಟ್ಯಾ, ಮೈನರ್ ಗಾರ್ಡಿಯರ್ ಮತ್ತು ತಾಯಿ ಪುಟ್ಟಮ್ಮ ಸದರೀ ವಾಸಸ್ಥನಾಗಿ ಮೃತಪಟ್ಟ ಪಟ್ಟ್ಯಾಚಾರಿ ಜೊಂದಗಿ ಬಗ್ಗಾಗಿ ಬರತಕ್ಕ 100 ರೂಪಾಯಿಗಳ ಸೂಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರೆಗೆ ಸರ್ಟಿಫಿಕೇಟ್ ಬಗ್ಗೆ ಈ ಕೋರ್ಟ್‌ಗೆ ಖಾಯಿಷ್ ಮಾಡಿರುತ್ತಾರೆ.